# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 574
ಸದಸ್ಯರ ಹೆಸರು : ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 11/07/2023
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ | ಮಂಡ್ಯ ಜಿಲ್ಲೆ, ಮಳವಳ್ಳಿ ಪುರಸಭೆಯನ್ನು ನಗರ ಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಇಲ್ಲ.<br>ಮಳವಳ್ಳಿ ಪುರಸಭೆಯನ್ನು ನಗರ ಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತಂತೆ ದಿನಾಂಕ:14/02/2022 ರಂದು ಅರ್ಹವಾದ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಪತ್ರ ಬರೆದಿದ್ದು, ದಿನಾಂಕ:03/03/2022 ರಂದು ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ ರವರಿಗೆ ಪ್ರಸ್ತಾವನೆ ಸಲ್ಲಿಸಲು ಕೋರಿ ನಿರ್ದೇಶನಾಲಯದಿಂದ ಪತ್ರ ಬರೆಯಲಾಗಿರುತ್ತದೆ. |
| ಆ | ಈ ನಗರ ಸಭೆಯ ರಚನೆಯ ರೂಪುರೇಷೆಗಳೇನು (ಪೂರ್ಣ ವಿವಿರ ನೀಡುವುದು). | ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಕಲಂ–3 ರನ್ವಯ ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳು:<br>1) ಅಂಥ ಪ್ರದೇಶದ ಜನಸಂಖ್ಯೆ ಐವತ್ತು ಸಾವಿರಕ್ಕಿಂತ ಕಡಿಮೆಯಿಲ್ಲದ ಹೊರತು;<br>2) ಅಂಥ ಪ್ರದೇಶದಲ್ಲಿನ ಜನಸಂಖ್ಯೆಯ ಸಾಂದ್ರತೆಯು ಒಂದು ಚದರ ಕಿಲೋಮೀಟರ್ ಪ್ರದೇಶಕ್ಕೆ ಒಂದು ಸಾವಿರದ ಐದುನೂರು ನಿವಾಸಿಗಳಿಗಿಂತ ಕಡಿಮೆಯಿಲ್ಲದ ಹೊರತು;<br>3) ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂಥ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಿಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಭತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬನಿಗೆ ನಲವತ್ತೈದು ರೂಪಾಯಿಗಳ ದರದಂತೆ ಲೆಕ್ಕ ಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆಯಿರದ ಹೊರತು;<br>4) ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗದ ಶೇಕಡಾವಾರು ಒಟ್ಟು ಉದ್ಯೋಗದ ಶೇಕಡ ಐವತ್ತಕ್ಕಿಂತ ಕಡಿಮೆಯಿಲ್ಲದ ಹೊರತು.<br>ಮೇಲ್ದರ್ಜೆಗೇರಿಸಲಾಗುವ ಪ್ರದೇಶದಲ್ಲಿ ಜಿಲ್ಲಾ ಕೇಂದ್ರ ಕಾರ್ಯಸ್ಥಾನ ಇದ್ದಲ್ಲಿ, ಆ ಪ್ರದೇಶವು 50,000 ಕ್ಕಿಂತ ಕಡಿಮೆ ಜನಸಂಖ್ಯೆಯನ್ನು ಹೊಂದಿದ್ದರೂ ಸಹ ನಗರಸಭೆಯನ್ನಾಗಿ ಪರಿವರ್ತಿಸಬಹುದಾಗಿದೆ. |
| ಇ | ಪುರಸಭೆ ವ್ಯಾಪ್ತಿಯಿಂದ ಹೊರಗಿರುವ | ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ ರವರಿಂದ ಮಂಡ್ಯ ಜಿಲ್ಲೆ, |

| | | |
|---|---|---|
| | ಯಾವ ಗ್ರಾಮಗಳನ್ನು ನಗರ ಸಭೆ ವ್ಯಾಪ್ತಿಗೆ ತರಲಾಗುವುದು. | ಮಳವಳ್ಳಿ ಪುರಸಭೆಯನ್ನು ನಗರ ಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಅಗತ್ಯ ದಾಖಲೆಗಳೊಂದಿಗೆ ಪ್ರಸ್ತಾವನೆಯು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರಿಗೆ ಸಲ್ಲಿಸಲ್ಪಟ್ಟು, ಅವರಿಂದ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರನ್ವಯ ಅರ್ಹವಾದ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತವಾದಲ್ಲಿ ನಿಯಾಮನುಸಾರ ಪರಿಶೀಲಿಸಿ ಕ್ರಮವಹಿಸಲಾಗುತ್ತದೆ. |
| ಈ | ಯಾವ ಕಾಲಮಿತಿಯಲ್ಲಿ ನಗರ ಸಭೆ ಅಸ್ತಿತ್ವಕ್ಕೆ ಬರುವುದು. | |

**ಸಂಖ್ಯೆ:ನಅಇ 15 ಎಲ್‌ಸಿಕ್ಯೂ 2023.**

(ರಹೀಂ ಖಾನ್)
**ಪೌರಾಡಳಿತ ಮತ್ತು ಹಜ್ ಸಚಿವರು**